ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/65/ಸುತ್ತೋಲೆ/ಆಯವ್ಯಯ/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಅರಮನೆರಸ್ತೆ, ಬೆಂಗಳೂರು-560001
ದಿನಾಂಕ:24.07.2017.

## ಸುತ್ತೋಲೆ

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಗೆ ಒಳಪಡುವ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಅಧ್ಯಾಪಕರುಗಳಿಗೆ ಯುಜಿಸಿ ಹಿಂಬಾಕಿ ಮೊತ್ತವನ್ನು ಪಾವತಿಸಲಾಗಿರುತ್ತದೆ. ಪರಿಶೀಲಿಸಲಾಗಿ, ಕೆಲವು ಕಾಲೇಜಿನಲ್ಲಿ ಯುಜಿಸಿ ಹಿಂಬಾಕಿ ಮೊತ್ತವನ್ನು ಪಾವತಿಸುವಾಗ ಮನೆ ಬಾಡಿಗೆ ಭತ್ಯೆ, ನಗರ ಪರಿಹಾರ ಭತ್ಯೆ ಹಾಗೂ ಇತರೆ ಭತ್ಯೆಗಳನ್ನು ಸಹ ಒಳಗೊಂಡಂತೆ ಹಿಂಬಾಕಿ ಮೊತ್ತವನ್ನು ಪಾವತಿಸಿರುವುದು ತಿಳಿದುಬಂದಿರುತ್ತದೆ. ಆದ್ದರಿಂದ ಈ ಕೂಡಲೇ ಜಾರಿಗೆ ಬರುವಂತೆ ಈ ತಿಂಗಳ ವೇತನದಿಂದಲೇ ಯುಜಿಸಿ ಹಿಂಬಾಕಿ ಮೊತ್ತದಲ್ಲಿ ಮನೆ ಬಾಡಿಗೆ ಭತ್ಯೆ, ನಗರ ಪರಿಹಾರ ಭತ್ಯೆ ಹಾಗೂ ಇತರೆ ಭತ್ಯೆಗಳನ್ನು ಒಳಗೊಂಡು ಪಾವತಿಸಲಾಗಿರುವ ಮೊತ್ತವನ್ನು ಸಂಬಂಧಪಟ್ಟ ಅಧ್ಯಾಪಕರುಗಳಿಂದ ವಸೂಲಾತಿ ಮಾಡುವಂತೆ ಈ ಮೂಲಕ ಸೂಚಿಸಲಾಗಿದೆ. ಹಾಗೂ ಕೈಗೊಂಡಕ್ರಮದ ಬಗ್ಗೆ ಈ ಕಛೇರಿಗೆ ವರದಿ ನೀಡುವುದು.

(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ನಿರ್ದೇಶಕರು,
ಕಾಲೇಜು ಶಿಕ್ಷಣ ಇಲಾಖೆ.

**ಇವರಿಗೆ:**

1) ಎಲ್ಲಾಪ್ರಾದೇಶಿಕ ಜಂಟಿ ನಿರ್ದೇಶಕರುಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಧಾರವಾಡ, ಕಲಬುರಗಿ ಹಾಗೂ ಮಂಗಳೂರು –ಅಗತ್ಯಕ್ರಮಕ್ಕಾಗಿ.
2) ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ– ಅಗತ್ಯ ಕ್ರಮಕ್ಕಾಗಿ ಹಾಗೂ ಸಂಬಂಧಪಟ್ಟ ಅಧ್ಯಾಪಕರುಗಳಿಗೆ ಮೇಲಿನ ಸುತ್ತೋಲೆಯನ್ನು ಗಮನಕ್ಕೆ ತಂದು ಸಹಿ ಪಡೆಯುವುದು.
3) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಲೆಕ್ಕಾಧಿಕಾರಿಗಳಿಗೆ ಅಗತ್ಯಕ್ರಮಕ್ಕಾಗಿ.

**ಪ್ರತಿಯನ್ನು:**

1) ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
2) ಹೆಚ್ಚುವರಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3) ಮುಖ್ಯ ಆಡಳಿತಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
4) ಲೆಕ್ಕಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು